ಅಲ್ಲದೇ, ಮೂರನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ ಕಿ.ಮೀ. 116.80 ರಲ್ಲಿ ರೂ.65.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸೇತುವೆ ನಿರ್ಮಾಣ ಮಾಡಲು ಯೋಜಿಸಿದೆ.

ಈ) ಸೊರಬ ತಾಲ್ಲೂಕು ಹಿರೇಕಲಗೋಡು ಸೇತುವೆಯನ್ನು ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಿಂದ ತೆಗೆದುಕೊಳ್ಳಲಾಗುತ್ತಿರುವ ಮೂರನೇ ಹಂತದ ಸೇತುವೆ ನಿರ್ಮಾಣ ಕಾಮಗಾರಿಯಲ್ಲಿ ರೂ. 140.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಳ್ಳಲು ಯೋಜಿಸಲಾಗಿದೆ ಮತ್ತು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಉ) ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವತಿಯಿಂದ 2ನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ, ಶಿವಮೊಗ್ಗ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 14 ಸೇತುವೆಗಳನ್ನು ರೂ.855 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಂಡಿದ್ದು ಕಾಮಗಾರಿ ಪ್ರಗತಿಯಲ್ಲಿದೆ.

ಅಲ್ಲದೇ, 3ನೇ ಹಂತದ ಸೇತುವೆ ನಿರ್ಮಾಣ ಯೋಜನೆಯಲ್ಲಿ 14 ಸೇತುವೆಗಳನ್ನು ರೂ.1178 ಲಕ್ಷಗಳ ಅಂದಾಜು ವೆಚ್ಚದಲ್ಲಿ ತೆಗೆದುಕೊಳ್ಳಲಾಗಿದೆ. ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

18, (89) ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ (ಬೆಳ್ಳಾವಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನಲ್ಲಿ ಬಡವನ ಹಳ್ಳಿಯಲ್ಲಿ ಪೊಲೀಸ್ ವಿಭಾಗದ ಹೊರ ಚೌಕಿ ಠಾಣೆ (ಔಟ್ ಪೊಲೀಸ್ ಸ್ಟೇಷನ್) ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ?

ಆ) ಈ ಪ್ರಸ್ತಾವನೆ ಸರ್ಕಾರದ ಮುಂದಿದ್ದಲ್ಲಿ ಯಾವಾಗ ಪ್ರಾರಂಭವಾಗಬಹುದು?

ಇ) ಹಾಗಿದ್ದಲ್ಲಿ, ಇದಕ್ಕೆ ಕಾಲಮಿತಿಯನ್ನೇನಾದರೂ ನಿಗಧಿಗೊಳಿಸಿದೆಯೇ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಹೌದು.

ಆ) ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

20, (113) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬ (ಬಸವಕಲ್ಯಾಣ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,